important matter. ಈಗ ಲೋಕಾಯುಕ್ತರು ರಾಜೀನಾಮೆ ಕೊಟ್ಟಿದ್ದಾರೆ ಮತ್ತೆ ಅಲ್ಲಿ ಉಪ ಲೋಕಾಯುಕ್ತರು ಇಲ್ಲ. ಇವತ್ತು ಲೋಕಾಯುಕ್ತರ ರಾಜೀನಾಮೆ accept ಆದರೆ ಇಡೀ ವ್ಯವಸ್ಥೆ ಅಂದರೆ, Lokayuktha Institution ನ ವ್ಯವಸ್ಥೆ ಕುಸಿದು ಹೋಗುತ್ತದೆ. ಆದ್ದರಿಂದ ಈ ವಿಚಾರವನ್ನು ರೂಲ್ 60ರ ಅಡಿಯಲ್ಲಿ ಚರ್ಚೆ ಮಾಡುವುದಕ್ಕೆ ಅವಕಾಶ ಕೊಡಿ ಎಂದು ಕೇಳುತ್ತಿದ್ದೇವೆ.

ಅಧ್ಯಕ್ಷರು: ತಮ್ಮ ಸ್ಥಾನಗಳಿಗೆ ದಯಮಾಡಿ ಹೋಗಿ ಎಂದು ಕೊನೆಯದಾಗಿ ಬಾವಿಯಲ್ಲಿರುವ ಸದಸ್ಯರಲ್ಲಿ ವಿನಂತಿ ಮಾಡುತ್ತೇನೆ.

ಶ್ರೀ ಸಿದ್ದರಾಮಯ್ಯ: ಮಾನ್ಯ ಅಧ್ಯಕ್ಷರೆ, ದಯಮಾಡಿ ತಾವು ತಪ್ಪು ತಿಳಿದುಕೊಳ್ಳಬಾರದೆಂದು ನಾನು ನಿಮಗೆ ಹೇಳುತ್ತಿದ್ದೇನೆ. ತಾವು ಈ ಸರ್ಕಾರಕ್ಕೆ ಸ್ವಲ್ಪ ಕಿವಿ ಹಿಂಡಿ. Ball is in your court, Please reconsider your ruling, Please allow discussion under rule 60.

ಅಧ್ಯಕ್ಷರು: ನಾನು rule 60 is cogent ಎಂದು ಹೇಳಿರುತ್ತೇನೆ.

ಶ್ರೀ ಸಿದ್ದರಾಮಯ್ಯ: It is very important, very serious, concerning the people, concerning the state, ಲೋಕಾಯುಕ್ತರವರು ಭ್ರಷ್ಟಾಚಾರದ ವಿರುದ್ಧ ಹೋರಾಟ ಮಾಡತಕ್ಕಂಥವರು. ಭ್ರಷ್ಟಾಚಾರಕ್ಕೆ ಈ ಸರ್ಕಾರ ಕುಮ್ಮಕ್ಕು ಕೊಡುತ್ತಿದೆ, ಅವರು ಇವತ್ತು ರಾಜೀನಾಮೆಯನ್ನು ಕೊಟ್ಟಿದ್ದಾರೆ. ಯುದ್ಧವನ್ನು ಸಾರಿದ್ದಾರೆ ಎನ್ನತಕ್ಕಂಥದ್ದು, ನೇರವಾಗಿ ಮುಖ್ಯಮಂತ್ರಿಗಳ ಮೇಲೆ ಆಪಾದನೆಗಳು ಇದ್ದಾವೆ.

ಅಧ್ಯಕ್ಷರು: ಈಗ ಸದನವನ್ನು ನಾಳೆ ಬೆಳಗ್ಗೆ 11.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು 5 ಗಂಟೆ 51 ನಿಮಿಷಕ್ಕೆ ಮುಕ್ತಾಯಗೊಂಡು ದಿನಾಂಕ:30-6-2010 ರಂದು ಬುಧವಾರ ಬೆಳಗ್ಗೆ:11.00 ಗಂಟೆಗೆ ಪುನಃ ಸಮಾವೇಶಗೊಳ್ಳುವುದು.)

5. ಅನುಬಂಧ I

ಹೇಮಾವತಿ ಜಲಾಶಯದಿಂದ ಮಂಚನಬೆಲೆ ಜಲಾಶಯಕ್ಕೆ ನೀರು ಹರಿಸುವುದು

1(18) : ಶ್ರೀ ರಾಜು ಕೆ: (ರಾಮನಗರ) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಹೇಮಾವತಿ ಜಲಾಶಯದಿಂದ ಮಂಚನಬೆಲೆ ಜಲಾಶಯಕ್ಕೆ ನೀರು ಹರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದೇ?

ಆ. ಹಾಗಿದ್ದಲ್ಲಿ, ಜಲಾಶಯಕ್ಕೆ ನೀರು ಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ. ಹಾಗಿದ್ದಲ್ಲಿ, ಹೇಮಾವತಿ ಜಲಾಶಯದಿಂದ ಮಂಚನಬೆಲೆ ಜಲಾಶಯಕ್ಕೆ ನೀರು ಹರಿಸಲು ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆಯೇ?

ಈ. ಹಾಗಿದ್ದಲ್ಲಿ, ಈ ಕಾಮಗಾರಿಗಾಗಿ ಸರ್ಕಾರವು ನಿಗದಿಪಡಿಸಿರುವ ಅನುದಾನದ ಮೊತ್ತ ಎಷ್ಟು?

ಬಸವರಾಜ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು)

ಅ) ಹೇಮಾವತಿ ನದಿಯಿಂದ ಮಂಚನಬೆಲೆ ಜಲಾಶಯಕ್ಕೆ ನೀರು ಹರಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಮೈಸೂರು ಜಿಲ್ಲೆಯಲ್ಲಿ ಕೆ.ಐ.ಎ.ಡಿ.ಬಿ. ರವರ ವತಿಯಿಂದ ಜಮೀನು ಸ್ವಾಧೀನ ಪಡಿಸಿಕೊಂಡಿರುವುದು.

2(11) ಶ್ರೀ ಪುಟ್ಟರಾಜು ಸಿ ಎಸ್:(ಮೇಲುಕೋಟೆ) ಮಾನ್ಯ ಬೃಹತ್ ಮತ್ತು ಮಾಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕಿನ ಇಲವಾಲ ಹೋಬಳಿ, ಮೈದನಹಳ್ಳಿ, ಇಲವಾಲ ಮತ್ತು ಕೂರಗಳ್ಳಿ ಗ್ರಾಮಗಳಿಗೆ ಸೇರಿದ ಜಮೀನುಗಳನ್ನು ಕೆಐಎಡಿಬಿಯವರು ಕೈಗಾರಿಕಾ ಅಭಿವೃದ್ಧಿಗಾಗಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿ ವಶಪಡಿಸಿಕೊಂಡ ಜಮೀನಿನ ವಿಸ್ತೀರ್ಣವೆಷ್ಟು: (ಸರ್ವೆ ನಂಬರಿನ ಸಹಿತ ಮಾಹಿತಿ ನೀಡುವುದು)